## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 480 |
| 2 | ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 22-12-2022 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನಲ್ಲಿ ಮನೆಯನ್ನು ನಿರ್ಮಿಸಿರುವವರಿಗೆ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೀಡಿರುವ 'ಎ' ಖಾತಾ ಪ್ರಮಾಣ ಪತ್ರಗಳ ಸಂಖ್ಯೆ ಎಷ್ಟು; ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೀಡುವ 'ಎ' ಖಾತಾ ಪ್ರಮಾಣ ಪತ್ರಗಳನ್ನು ಪಡೆಯಲುಇರುವ ಅರ್ಹತೆಗಳೇನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿಅಂದಾಜು 12.94 ಲಕ್ಷ ಸ್ವತ್ತುಗಳ ವಿವರಗಳನ್ನು 'ಎ' ವಹಿಯಲ್ಲಿದಾಖಲಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತುತ ಭೂಪರಿವರ್ತನೆಗೊಂಡ ಏಕ ನಿವೇಶನಗಳಿಗೆ ಹಾಗೂ ಸಕ್ಷಮ ಪ್ರಾಧಿಕಾರದಿಂದಅನುಮೋದನೆಗೊಂಡು ವಿಭಜನೆಗೊಂಡ ಸ್ವತ್ತುಗಳ ವಿವರಗಳನ್ನು 'ಎ' ವಹಿಯಲ್ಲಿದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಬೆಂಗಳೂರಿನಲ್ಲಿ 30X40 ವಿಸ್ತೀರ್ಣಕ್ಕಿಂತ ಕಡಿಮೆ ವಿಸ್ತೀರ್ಣ ಇರುವ ನಿವೇಶನಗಳಿಗೆ ಕಟ್ಟಡಗಳನ್ನು ನಿರ್ಮಿಸಲು ನಕ್ಷೆಯ ಮಂಜೂರಾತಿಯನ್ನುಕಡ್ಡಾಯವಾಗಿ ಪಡೆಯಬೇಕಾಗಿದೆಯೇ; 30X40 ವಿಸ್ತೀರ್ಣಕ್ಕಿಂತ ಕಡಿಮೆ ವಿಸ್ತೀರ್ಣ ಇರುವ ನಿವೇಶನಗಳಲ್ಲಿ ಕಟ್ಟಡಗಳನ್ನು ನಿರ್ಮಿಸಿ ತೆರಿಗೆಯನ್ನು ಪಾವತಿಮಾಡುತ್ತಿರುವವರ ಸಂಖ್ಯೆ ಎಷ್ಟು;ಇದು ಸಕ್ರಮವೇ / ಅಕ್ರಮವೇ; | ಅನುಮೋದಿತ ವಲಯ ನಿಯಮಾವಳಿ-2015 ಹಾಗೂ ಕಟ್ಟಡಉಪವಿಧಿ-2003 ರಂತೆ ಪಾಲಿಕೆ ವ್ಯಾಪ್ತಿಯಲ್ಲಿ 30X40 ವಿಸ್ತೀರ್ಣ ಹಾಗೂ ಅದಕ್ಕಿಂತಕಡಿಮೆ ವಿಸ್ತೀರ್ಣವಿರುವ ನಿವೇಶನಗಳಿಗೆ ನಕ್ಷೆ ಮಂಜೂರಾತಿಯನ್ನು ಪಡೆಯಬೇಕಾಗಿರುತ್ತದೆ.<br><br>30X40 ವಿಸ್ತೀರ್ಣಕ್ಕಿಂತ ಕಡಿಮೆ ವಿಸ್ತೀರ್ಣ ಇರುವ ನಿವೇಶನಗಳಲ್ಲಿ ಕಟ್ಟಡಗಳನ್ನು ನಿರ್ಮಿಸಿರುವ ಅಂದಾಜು 7.49 ಲಕ್ಷ ಸ್ವತ್ತುಗಳ ಮಾಲೀಕರುಗಳಿಂದ ಆಸ್ತಿ ತೆರಿಗೆಯನ್ನು ಪಾವತಿಸಿಕೊಳ್ಳಲಾಗುತ್ತಿದೆ.<br><br>ಕಟ್ಟಡ ನಕ್ಷೆ ಮಂಜೂರಾತಿ ಪಡೆದು, ಮಂಜೂರಾತಿ ನಕ್ಷೆಯನ್ವಯ ನಿರ್ಮಾಣ ಮಾಡಿರುವ ಕಟ್ಟಡಗಳು ಸಕ್ರಮವಾಗಿರುತ್ತದೆ. ಇದಕ್ಕೆ ವ್ಯತಿರಿಕ್ತವಾಗಿ ಹಾಗೂ ನಕ್ಷೆ ಮಂಜೂರಾತಿ ಪಡೆಯದೇ ನಿರ್ಮಿಸಿರುವ ಕಟ್ಟಡಗಳು ಅಕ್ರಮವಾಗಿರುತ್ತವೆ. |
| ಇ) | 30X40 ವಿಸ್ತೀರ್ಣಕ್ಕಿಂತ ಕಡಿಮೆ ವಿಸ್ತೀರ್ಣ ಇರುವ ನಿವೇಶನಗಳಿಗೆ ಕಟ್ಟಡಗಳಿಗೆ 'ಎ' ಖಾತಾ ಪ್ರಮಾಣಪತ್ರ ನೀಡುವ ಸಂಬಂಧ ಸರ್ಕಾರದಕ್ರಮವೇನು? | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿಇರುವ ನಿವೇಶನಗಳಿಗೆ ಕಟ್ಟಡಗಳಿಗೆ 'ಎ' ಖಾತಾ ಪ್ರಮಾಣಪತ್ರ ನೀಡುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿತಡೆಯಾಜ್ಞೆಇದ್ದು, ಪ್ರಕರಣವನ್ನುತ್ವರಿತವಾಗಿ ವಿಚಾರಣೆಗೆಕೈಗೆತ್ತಿಕೊಂಡುಇತ್ಯರ್ಥ ಗೊಳಿಸುವಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮಧ್ಯಂತರಅರ್ಜಿ ಸಲ್ಲಿಸಲಾಗಿರುತ್ತದೆ. |

**ಸಂಖ್ಯೆ: ನಅಇ 555 ಎಂಎನ್‌ಯು 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ